# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 235
ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 15.02.2024
ಉತ್ತರಿಸುವ ಸಚಿವರು : ಮುಖ್ಯಮಂತ್ರಿಯವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅಭಿವೃದ್ಧಿಯ ಆದಾಯದಲ್ಲಿ ಹೆಚ್ಚಿನ ಪಾಲು ಕೇಂದ್ರ ಸರ್ಕಾರಕ್ಕೆ ಸಂದಾಯವಾಗುತ್ತಿದ್ದರೂ, ಕೇಂದ್ರ ಸರ್ಕಾರ ರಾಜ್ಯಕ್ಕೆ ನೀಡಬೇಕಾದ ತೆರಿಗೆ ಪಾಲಿನ ಮೊತ್ತವು ವರ್ಷದಿಂದ ವರ್ಷಕ್ಕೆ ಇಳಿಮುಖವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ರಾಜ್ಯದಿಂದ ಕೇಂದ್ರ ಸರ್ಕಾರಕ್ಕೆ ಸಂದಾಯವಾಗುವ ತೆರಿಗೆಯು ವರ್ಷದಿಂದ ವರ್ಷಕ್ಕೆ ಏರಿಕೆಯಾಗಿದ್ದರೂ ಸಹ ಕೇಂದ್ರದಿಂದ ರಾಜ್ಯಕ್ಕೆ ಸ್ವೀಕೃತವಾಗುವ ತೆರಿಗೆ ಪಾಲು ಅದಕ್ಕೆ ಅನುಕ್ರಮವಾಗಿ ಏರಿಕೆಯಾಗುವ ಬದಲು ಕಡಿಮೆಯಾಗಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಅಭಿವೃದ್ಧಿ ಹೊಂದಿದ ರಾಜ್ಯಗಳಿಗೂ ಹಾಗೂ ಅಭಿವೃದ್ಧಿ ಹೊಂದುತ್ತಿರುವ ರಾಜ್ಯಗಳಿಗೂ ಕೇಂದ್ರ ಸರ್ಕಾರ ತೆರಿಗೆ ಪಾಲು ನೀಡುವಲ್ಲಿ ತಾರತಮ್ಯ ನೀತಿಯನ್ನು ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯಗಳಿಂದ ಸಂಗ್ರಹವಾದ ತೆರಿಗೆಯನ್ನು ಕೇಂದ್ರ ಸರ್ಕಾರವು ಅದಕ್ಕೆ ಅನುಕ್ರಮವಾಗಿ ಹಂಚಿಕೆ ಮಾಡುತ್ತಿಲ್ಲ. ತೆರಿಗೆ ಸಂಗ್ರಹಣೆಯಲ್ಲಿ ಕರ್ನಾಟಕ ರಾಜ್ಯವು ದೇಶದಲ್ಲಿಯೇ ಪ್ರಮುಖ ರಾಜ್ಯವಾಗಿದ್ದರೂ ಸಹ ಕೇಂದ್ರದಿಂದ ರಾಜ್ಯಕ್ಕೆ ಸ್ವೀಕೃತವಾಗುವ ತೆರಿಗೆ ಪಾಲು ಇತರೆ ರಾಜ್ಯಗಳಿಗೆ ಹೋಲಿಸಿದರೆ ಬಹಳಷ್ಟು ಕಡಿಮೆಯಿದೆ.<br><br>ಕೇಂದ್ರ ಸರ್ಕಾರದ ಒಟ್ಟು ತೆರಿಗೆ ಸಂಗ್ರಹಣೆಯಲ್ಲಿ (cess ಹಾಗು surcharge ಗಳನ್ನು ಹೊರತುಪಡಿಸಿ) ಶೇಕಡ 41 ರಷ್ಟನ್ನು ಪಾಲನ್ನು ರಾಜ್ಯಗಳಿಗೆ ಹಂಚಿಕೆ ಮಾಡಲಾಗುತ್ತದೆ. ತೆರಿಗೆ ಹಂಚಿಕೆಯ ಒಟ್ಟು ಮೊತ್ತದಲ್ಲಿ ಹೆಚ್ಚು ತೆರಿಗೆ ಸಂಗ್ರಹಣೆ ಮಾಡುವ ರಾಜ್ಯಗಳಿಗೆ ಕಡಿಮೆ ಪಾಲನ್ನು ನೀಡುತ್ತಿದ್ದು, ಹೆಚ್ಚಿನ ಪಾಲನ್ನು ಅಭಿವೃದ್ಧಿ ಹೊಂದುತ್ತಿರುವ ರಾಜ್ಯಗಳಿಗೆ ಅಥವ ಕಡಿಮೆ ತೆರಿಗೆ ಸಂಗ್ರಹಣೆ ಮಾಡುತ್ತಿರುವ ರಾಜ್ಯಗಳಿಗೆ ನೀಡಲಾಗುತ್ತಿದೆ. ತೆರಿಗೆ ಸಂಗ್ರಹಣೆಯಲ್ಲಿ ಕರ್ನಾಟಕ ರಾಜ್ಯವು ದೇಶದಲ್ಲಿಯೇ ಪ್ರಮುಖ ರಾಜ್ಯವಾಗಿದ್ದರೂ ಸಹ ರಾಜ್ಯಗಳಿಗೆ ಹಂಚಿಕೆಯಾಗುವ ಒಟ್ಟು ತೆರಿಗೆ ಪಾಲಿನಲ್ಲಿ ಕರ್ನಾಟಕಕ್ಕೆ ಶೇಕಡ 3.64ರಷ್ಟನ್ನು ಮಾತ್ರ ನೀಡಲಾಗುತ್ತಿದೆ. ಆದರೆ, ಅಭಿವೃದ್ಧಿಯಲ್ಲಿ ಕರ್ನಾಟಕ ರಾಜ್ಯಕ್ಕಿಂತ ಕಡಿಮೆ ಪ್ರಗತಿ ಹೊಂದಿರುವ ರಾಜ್ಯಗಳಾದ ಉತ್ತರ ಪ್ರದೇಶ, ಬಿಹಾರ, ಮಧ್ಯಪ್ರದೇಶ, ರಾಜಸ್ಥಾನ ರಾಜ್ಯಗಳಿಗೆ ಹೆಚ್ಚಿನ ತೆರಿಗೆ ಪಾಲನ್ನು ನೀಡಲಾಗುತ್ತಿದೆ. |

| | | |
|---|---|---|
| | | ಕೇಂದ್ರ ಸರ್ಕಾರವು ಪ್ರಸ್ತುತ ರಾಜ್ಯಗಳಿಗೆ ಹಂಚಿಕೆ ಮಾಡುತ್ತಿರುವ ತೆರಿಗೆ ಪಾಲಿನ ಶೇಕಡವಾರು ವಿವರ ಈ ಕೆಳಕಂಡಂತಿದೆ.<br><br>**ರಾಜ್ಯ** / **ತೆರಿಗೆ ಹಂಚಿಕೆಯ ಪಾಲು**<br>ಕರ್ನಾಟಕ: 3.64<br>ಉತ್ತರಪ್ರದೇಶ: 17.9<br>ಬಿಹಾರ: 10.05<br>ಮಧ್ಯಪ್ರದೇಶ: 7.8<br>ರಾಜಸ್ಥಾನ: 6.02 |
| ಇ) | ತೆರಿಗೆ ಪಾಲಿನ ಹಕ್ಕಿಗಾಗಿ ಸರ್ಕಾರ ಕೇಂದ್ರ ಸರ್ಕಾರದ ಮುಂದೆ ತನ್ನ ನಿಲುವನ್ನು ಪ್ರತಿಪಾದಿಸಿದೆಯೇ; | 15ನೇ ಹಣಕಾಸು ಆಯೋಗದ ಶಿಫಾರಸ್ಸಿನಿಂದ ರಾಜ್ಯಕ್ಕೆ ತೆರಿಗೆ ಪಾಲು ಕಡಿಮೆಯಾಗಿದ್ದು, ಇತರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕ ರಾಜ್ಯಕ್ಕೆ ತೆರಿಗೆ ಹಂಚಿಕೆಯಲ್ಲಿ ಆಗಿರುವ ನಷ್ಟವನ್ನು ಸರಿಪಡಿಸಲು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಪತ್ರ ಮುಖೇನ ಹಲವು ಬಾರಿ ತನ್ನ ಮನವಿಯನ್ನು ಸಲ್ಲಿಸಿರುತ್ತದೆ. |
| ಈ) | 16ನೇ ಹಣಕಾಸು ಆಯೋಗದ ಮುಂದೆ ಸರ್ಕಾರ ಮಂಡಿಸಿರುವ ಪ್ರಸ್ತಾವನೆಗಳೇನು? | ಪ್ರಸ್ತುತ 16ನೇ ಹಣಕಾಸು ಆಯೋಗಕ್ಕೆ Terms of Reference ಗೆ ರಾಜ್ಯದ ವತಿಯಿಂದ ಸಲಹೆಗಳನ್ನು ಒದಗಿಸಲಾಗಿದೆ. ಈ ಹಣಕಾಸು ಆಯೋಗಕ್ಕೆ ಮುಂದಿನ ತಿಂಗಳುಗಳಲ್ಲಿ ಜ್ಞಾಪನಾ ಪತ್ರ ದ (Memorandum) ಮೂಲಕ ಸರ್ಕಾರವು ಹೆಚ್ಚಿನ ತೆರಿಗೆ ಪಾಲು ಮತ್ತು ಅನುದಾನಗಳನ್ನು ವೈಜ್ಞಾನಿಕವಾಗಿ ವಿಶ್ಲೇಷಿಸಿ ಕೋರಿಕೆಗಳನ್ನು ಸಲ್ಲಿಸುತ್ತದೆ. |

**ಸಂಖ್ಯೆ: ಆಇ 05 ಆಆಕೋ 2024**

(ಸಿದ್ದರಾಮಯ್ಯ)
ಮುಖ್ಯ ಮಂತ್ರಿ